# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆಗುರುತಿನ ಪ್ರಶ್ನೆ ಸಂಖ್ಯೆ | : **1185** |
| ಸದಸ್ಯರ ಹೆಸರು | : ಶ್ರೀ. ಶರವಣ ಟಿ.ಎ.<br>(ವಿಧಾನಸಭಾ ಕ್ಷೇತ್ರ) |
| ಉತ್ತರಿಸಬೇಕಾದ ಸಚಿವರು | : ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು |
| ಉತ್ತರಿಸಬೇಕಾದ ದಿನಾಂಕ | : 17-12-2025 |

| | ಪ್ರಶ್ನೆ | ಉತ್ತರ |
|---|---|---|
| ಅ. | ಉಡುಪಿ ಮತ್ತು ಮಂಗಳೂರು ಆರ್.ಟಿ.ಓ ಕಛೇರಿಯಲ್ಲಿ ಐಷಾರಾಮಿ ಕಾರುಗಳ ನೋಂದಣಿಯಲ್ಲಿ ಖೊಟ್ಟಿ ದಾಖಲೆಗಳನ್ನು ಸೃಷ್ಟಿಸಿ, ನಿಜವಾದ ವಾಹನದ ಮೌಲ್ಯವನ್ನು ಮರೆಮಾಚಿ ರಿಜಿಸ್ಟ್ರೇಷನ್ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಅಂತಹ ಪ್ರಕರಣಗಳ ಸಂಪೂರ್ಣ ವಿವರ ನೀಡುವುದು; | ಹೌದು, ಈ ರೀತಿಯ ಒಂದು ಪ್ರಕರಣವಾದ ಸಂಖ್ಯೆ: KA-20/MH-0888ರ ವಾಹನವನ್ನು ನೋಂದಣಿ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. ವಿವರ ಕೆಳಕಂಡಂತಿದೆ:<br>1. ದಿನಾಂಕ:01-01-2017 ರಂದು ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಕಛೇರಿ, ಎಲೆಕ್ಟ್ರಾನಿಕ್ ಸಿಟಿ ಇಲ್ಲಿಂದ ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಕಛೇರಿ, ಮಂಗಳೂರು ಇಲ್ಲಿಗೆ ತಾತ್ಕಾಲಿಕ ನೋಂದಣಿ ಪತ್ರವನ್ನು ಶ್ರೀ ನಿಹಾಲ್ ಅಹಮದ್, ಮಂಗಳೂರು ಇವರ ಹೆಸರಿನಲ್ಲಿ ನೀಡಲಾಗಿದೆ. ಆ ಸಮಯದಲ್ಲಿ ವಾಹನದ ಮೌಲ್ಯವು ರೂ.1,96,95,000/- ಆಗಿರುತ್ತದೆ.<br>2. ಸದರಿ ತಾತ್ಕಾಲಿಕ ನೋಂದಣಿಯ ವಿವರಗಳನ್ನು ಉಪ ಸಾರಿಗೆ ಆಯುಕ್ತರು ಮತ್ತು ಹಿರಿಯ ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಕಛೇರಿ, ಮಂಗಳೂರು ಇಲ್ಲಿ ವಿಷಯ ನಿರ್ವಾಹಕರು, ಅಧೀಕ್ಷಕರು ಮತ್ತು ಕೇಂದ್ರ ಸ್ಥಾನೀಯ ಸಹಾಯಕರು ಇವರ Login ID ಗಳಲ್ಲಿ ತಿದ್ದುಪಡಿ ಮಾಡಿ ವಾಹನದ ಮೌಲ್ಯವನ್ನು ರೂ.32,15,000/- ಎಂದು ನಮೂದಿಸಿ, ವಾಹನದ ಮಾಲೀಕರ ಹೆಸರನ್ನು ಸಹ ಬದಲಾಯಿಸಿ ಶ್ರೀ ನೀರಜ್ ಕುಮಾರ್ ಶರ್ಮಾ ಎಂಬುವವರ ಹೆಸರಿಗೆ ನಮೂದಿಸಲಾಗಿದೆ. ತದನಂತರ ಉಡುಪಿ ಪ್ರಾದೇಶಿಕ ಸಾರಿಗೆ ಕಛೇರಿಯಲ್ಲಿ KA 20 MH 0888 ಸಂಖ್ಯೆ ನೀಡಿ ನೋಂದಣಿ ಮಾಡಲಾಗಿರುತ್ತದೆ. |
| ಆ. | ಕೆಲವು ಐಷಾರಾಮಿ ಕಾರುಗಳನ್ನು ಹೊರ ರಾಜ್ಯದಲ್ಲಿ ಖೊಟ್ಟಿ ದಾಖಲೆಗಳನ್ನು ಸೃಷ್ಟಿಸಿ ನೋಂದಾಯಿಸಿರುವ ಪ್ರಕರಣಗಳು ಕಂಡು ಬಂದಾಗ, | ಮೇಲಿನ ಪ್ರಕರಣವನ್ನು ಹೊರತುಪಡಿಸಿ ಐಷಾರಾಮಿ ಕಾರುಗಳನ್ನು ಹೊರ ರಾಜ್ಯದಲ್ಲಿ ಖೊಟ್ಟಿ ದಾಖಲೆಗಳನ್ನು ಸೃಷ್ಟಿಸಿ ಕರ್ನಾಟಕ ರಾಜ್ಯದಲ್ಲಿ ನೋಂದಾಯಿಸಿರುವ ಇತರೆ ಪ್ರಕರಣಗಳು ಕಂಡು ಬಂದಿರುವುದಿಲ್ಲ. |

| | ಪ್ರಶ್ನೆ | ಉತ್ತರ |
|---|---|---|
| | ಸದರಿ ನೋಂದಣಿಯನ್ನು ರದ್ದುಗೊಳಿಸಿ ಪೋಲೀಸ್ ಠಾಣೆಯಲ್ಲಿ ಪ್ರಕರಣವನ್ನು ದಾಖಲಿಸಿದ ನಂತರವೂ ಸಹ ರಾಜ್ಯದ ಕೆಲವು ಆರ್.ಟಿ.ಓ ಕಛೇರಿಗಳಲ್ಲಿ ಸದರಿ ಪ್ರಕರಣಗಳು ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಅಂತಹ ಪ್ರಕರಣಗಳನ್ನು ತಡೆಯಲು ಸರ್ಕಾರ ಕೈಗೊಂಡ ಕ್ರಮಗಳೇನು? | |
| ಇ. | ಮಂಗಳೂರು ಮತ್ತು ಉಡುಪಿ ಆರ್.ಟಿ.ಓ ಕಛೇರಿಗಳಲ್ಲಿ ಖೊಟ್ಟಿ ದಾಖಲೆಗಳನ್ನು ಸೃಷ್ಟಿಸಿ, ಕಾರಿನ ನಿಜವಾದ ಮೌಲ್ಯವನ್ನು ಮರೆಮಾಚಿ, ಸರ್ಕಾರದ ಬೊಕ್ಕಸಕ್ಕೆ ನಷ್ಟವುಂಟು ಮಾಡಿದ ಅಧಿಕಾರಿಗಳ ವಿರುದ್ಧ ಕೈಗೊಂಡ ಕ್ರಮಗಳೇನು? (ವಿವರಗಳನ್ನು ನೀಡುವುದು). | ಮಂಗಳೂರು ಮತ್ತು ಉಡುಪಿ ಆರ್.ಟಿ.ಓ ಕಛೇರಿಗಳಲ್ಲಿ ಖೊಟ್ಟಿ ದಾಖಲೆಗಳನ್ನು ಸೃಷ್ಟಿಸಿ, ಕಾರಿನ ನಿಜವಾದ ಮೌಲ್ಯವನ್ನು ಮರೆಮಾಚಿ, ಸರ್ಕಾರದ ಬೊಕ್ಕಸಕ್ಕೆ ನಷ್ಟವುಂಟು ಮಾಡಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಮಂಗಳೂರು ಕಛೇರಿಯ ಶ್ರೀಮತಿ ಸರಸ್ವತಿ ಜಿ. ಕೇಂದ್ರ ಸ್ಥಾನೀಯ ಸಹಾಯಕರು, ಶ್ರೀಮತಿ ರೇಖಾ ನಾಯಕ್, ಅಧೀಕ್ಷಕರು ಮತ್ತು ಶ್ರೀ ನೀಲಪ್ಪ ಕೆ.ಹೆಚ್. ಪ್ರಥಮ ದರ್ಜೆ ಸಹಾಯಕರು ಹಾಗೂ ಉಡುಪಿ ಕಛೇರಿಯ ಶ್ರೀಮತಿ ಪವಿತಾ, ಅಧೀಕ್ಷಕರು ಇವರುಗಳನ್ನು ಸೇವೆಯಿಂದ ಅಮಾನತ್ತುಗೊಳಿಸಲಾಗಿರುತ್ತದೆ ಹಾಗೂ ಈ ಸಂಬಂಧ ಇಲಾಖಾ ವಿಚಾರಣೆ ಜಾರಿಯಲ್ಲಿರುತ್ತದೆ.<br><br>ಮುಂದುವರೆದು, ಈ ಪ್ರಕರಣಕ್ಕೆ ಸಂಬಂಧಿಸಿದಂತೆ, ಲೋಕಾಯುಕ್ತ ಪೋಲೀಸರ ಪ್ರಸ್ತಾವನೆಯ ಮೇರೆಗೆ ಶ್ರೀ ಲಕ್ಷ್ಮೀನಾರಾಯಣ ಪಿ. ನಾಯಕ್, ಪ್ರಾದೇಶಿಕ ಸಾರಿಗೆ ಅಧಿಕಾರಿ, ಉಡುಪಿ ಇವರ ವಿರುದ್ಧ ವಿಚಾರಣೆ / ತನಿಖೆ ಕೈಗೊಳ್ಳಲು ಭ್ರಷ್ಟಾಚಾರ ಪ್ರತಿಬಂಧಕ ಕಾಯ್ದೆಯ ಕಲಂ 17(ಎ) ಅನ್ವಯ ಪೂರ್ವಾನುಮತಿಯನ್ನು ಸಹ ನೀಡಲಾಗಿರುತ್ತದೆ. |

**ಟಿಡಿ 91 ಟಿಡಿಕ್ಯೂ 2025**

(ರಾಮಲಿಂಗಾರೆಡ್ಡಿ)
ಸಾರಿಗೆ ಮತ್ತು ಮುಜರಾಯಿ ಸಚಿವರು.